338

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿ12(ಸಿ1)ಪಿಆರ್/83/20-21

ಆಯುಕ್ತರವರ ಕಛೇರಿ
ಬೃಹತ್ ಮಹಾನಗರ ಪಾಲಿಕೆ ಕಛೇರಿಗಳು,
ಬೆಂಗಳೂರು, ದಿನಾಂಕ: 10/12/2020

**ಸುತ್ತೋಲೆ**

ವಿಷಯ: ಲೆಕ್ಕಪರಿಶೋಧನಾಧಿಕಾರಿ ಹುದ್ದೆಗೆ ಮುಂಬಡ್ತಿ ನೀಡುವ ಬಗ್ಗೆ.

------

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಖಾಲಿ ಇರುವ ಲೆಕ್ಕಪರಿಶೋಧನಾಧಿಕಾರಿ ಹುದ್ದೆಗಳಿಗೆ ಅರ್ಹ ಲೆಕ್ಕಾಧೀಕ್ಷಕರ ಹುದ್ದೆಯಿಂದ ಮುಂಬಡ್ತಿ ನೀಡಲು ಉದ್ದೇಶಿಸಿರುವ ಹಿನ್ನೆಲೆಯಲ್ಲಿ ಸಂಬಂಧಪಟ್ಟ ಬಟವಾಡೆ ಅಧಿಕಾರಿಗಳು ತಮ್ಮ ಕಛೇರಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಲೆಕ್ಕಪರಿಶೋಧನಾಧಿಕಾರಿ ಹುದ್ದೆಗೆ ಮುಂಬಡ್ತಿ ಹೊಂದಲು ಅರ್ಹರಿದ್ದಲ್ಲಿ, ಅಂತಹ ಲೆಕ್ಕಾಧೀಕ್ಷಕರ ಸೇವಾ ಪುಸ್ತಕ, ವಿದ್ಯಾರ್ಹತೆ ಪ್ರಮಾಣ ಪತ್ರಗಳು, ಇಲಾಖಾ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರುವ ಪ್ರಮಾಣ ಪತ್ರಗಳು, 3 ವರ್ಷಗಳ ಕಾರ್ಯನಿರ್ವಹಣಾ ವರದಿ (2017-18, 2018-19 ಮತ್ತು 2019-20), ಮುಂಬಡ್ತಿಗೆ ಇಚ್ಛೆ ಇರುವ / ಇಲ್ಲದಿರುವ ಬಗ್ಗೆ ಐಚ್ಛಿಕತೆ ಪತ್ರವನ್ನು ಮತ್ತು ಈ ಸುತ್ತೋಲೆಯೊಂದಿಗೆ ಲಗತ್ತಿಸಿರುವ ನಮೂನೆಯಲ್ಲಿ ಭರ್ತಿ ಮಾಡಿ ದೃಢೀಕರಣದೊಂದಿಗೆ ಈ ಸುತ್ತೋಲೆ ಹೊರಡಿಸಿದ 07 ದಿನಗಳೊಳಗಾಗಿ ಆಯುಕ್ತರ ಕಛೇರಿಯ ಆಡಳಿತ ಶಾಖೆಗೆ ಕಳುಹಿಸಿಕೊಡಲು ಸಂಬಂಧಪಟ್ಟ ಎಲ್ಲಾ ಬಟವಾಡೆ ಅಧಿಕಾರಿಗಳಿಗೆ ಸೂಚಿಸಿದೆ.

ಮಾನ್ಯ ವಿಶೇಷ ಆಯುಕ್ತರು (ಆಡಳಿತ)
ರವರ ಆದೇಶದಂತೆ)

ಉಪ ಆಯುಕ್ತರು (ಆಡಳಿತ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
26/11/2020 26/11/2020

ಪ್ರತಿಯನ್ನು : ಮಾನ್ಯ ಆಡಳಿತಗಾರರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಆಯುಕ್ತರು / ವಿಶೇಷ ಆಯುಕ್ತರು (ಆಡಳಿತ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಎಲ್ಲಾ ವಲಯ ಅಪರ / ಜಂಟಿ ಆಯುಕ್ತರು ರವರಿಗೆ ಕಳುಹಿಸಿದೆ.
: ಎಲ್ಲಾ ವಲಯ ಮತ್ತು ಯೋಜನೆಗಳ ಮುಖ್ಯ ಅಭಿಯಂತರರು ರವರಿಗೆ ಕಳುಹಿಸಿದೆ.
: ಮುಖ್ಯ ಲೆಕ್ಕಾಧಿಕಾರಿ / ಮತ್ತು ಎಲ್ಲಾ ವಲಯದ ಉಪ / ಸಹಾಯಕ ನಿಯಂತ್ರಕರು (ಹಣಕಾಸು) ರವರಿಗೆ ಕಳುಹಿಸಿದೆ.
: ಉಪ ನಿಯಂತ್ರಕರು (ಹಣಕಾಸು) ರವರಿಗೆ ಕಳುಹಿಸಿದೆ.
: ಮಾಹಿತಿ ತಂತ್ರಜ್ಞಾನ ಸಲಹೆಗಾರರು ರವರಿಗೆ ಕಳುಹಿಸುತ್ತಾ, ಸದರಿ ಸುತ್ತೋಲೆಯನ್ನು ಪಾಲಿಕೆಯ ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸಲು ಸೂಚಿಸಿದೆ.
: ಸಂಬಂಧಪಟ್ಟ ಎಲ್ಲಾ ಬಟವಾಡೆ ಅಧಿಕಾರಿಗಳಿಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
: ಕಛೇರಿ ಪ್ರತಿ.

## ನಮೂನೆ

| ಕ್ರಮ ಸಂಖ್ಯೆ | ವಿಷಯ | ಮಾಹಿತಿ |
|---|---|---|
| 1. | ಹೆಸರು | |
| 2. | ಪದನಾಮ | |
| 3. | ಹುಟ್ಟಿದ ದಿನಾಂಕ | |
| 4. | ಕೆಲಸಕ್ಕೆ ಸೇರಿದ ದಿನಾಂಕ | |
| 5. | ಪ್ರವರ್ಗ | |
| 6. | ಪರೀಕ್ಷಾರ್ಥ ಸೇವಾವಧಿಯನ್ನು ಘೋಷಿಸಿಕೊಂಡ ದಿನಾಂಕ | |
| 7. | ವಿದ್ಯಾರ್ಹತೆ | |
| 8. | ಇಲಾಖಾ ಪರೀಕ್ಷೆಗಳನ್ನು ಪಾಸು ಮಾಡಿದ ವಿವರಗಳು | 1)<br>2)<br>3)<br>4)<br>5) |
| 9. | ಕಾರ್ಯನಿರ್ವಹಣಾ ವರದಿ (3 ವರ್ಷಗಳು) | |
| 10. | ಇವರ ವಿರುದ್ಧ ಲೋಕಾಯುಕ್ತ/ಇಲಾಖಾ ವಿಚಾರಣೆ ಬಾಕಿ ಇದೆಯೇ ಅಥವಾ ಇಲ್ಲವೇ? (ಇದ್ದಲ್ಲಿ ಪ್ರಕರಣದ ವಿವರಗಳನ್ನು ಒದಗಿಸುವುದು) | |
| 11. | ಹೈದ್ರಾಬಾದ್-ಕರ್ನಾಟಕ ಪ್ರದೇಶಕ್ಕೆ ಸೇರಿದವರಾಗಿರುತ್ತಾರೆಯೇ / ಇಲ್ಲವೇ? | |
| 12. | ಷರಾ | |

ಬಟವಾಡೆ ಅಧಿಕಾರಿಗಳು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ